# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 220.
2. ಸದಸ್ಯರ ಹೆಸರು : ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ).
3. ಉತ್ತರಿಸಬೇಕಾದ ದಿನಾಂಕ : 14.09.2022.
4. ಉತ್ತರಿಸುವ ಸಚಿವರು : ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಯೋಜನೆಯು ಯಾವ ವರ್ಷದಲ್ಲಿ ಪ್ರಾರಂಭವಾಯಿತು; ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ; (ಮಾಹಿತಿ ನೀಡುವುದು) | ಬಳ್ಳಾರಿಯಲ್ಲಿ ವಿಮಾನ ನಿಲ್ದಾಣವನ್ನು ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಮೆ\|\| ಮಾರ್ಗ್ ಶ್ರೀ ಕೃಷ್ಣದೇವರಾಯ ಏರ್‌ಪೋರ್ಟ್ ಪ್ರೈ. ಲಿ. ಚೆನ್ನೈ ಸಂಸ್ಥೆ ಇವರೊಂದಿಗೆ ದಿನಾಂಕ: 18/09/2010 ಯೋಜನಾ ಅಭಿವೃದ್ಧಿ ಒಪ್ಪಂದವನ್ನು (Project Development Agreement) ಮಾಡಿಕೊಳ್ಳಲಾಗಿತ್ತು. ಸದರಿ ಸಂಸ್ಥೆಯು ಇದುವರೆಗೆ ಉದ್ದೇಶಿತ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸುವ ಬಗ್ಗೆ ಕ್ರಮವಹಿಸಿರುವುದಿಲ್ಲ. ಆದ್ದರಿಂದ, ಬಳ್ಳಾರಿ ವಿಮಾನ ನಿಲ್ದಾಣದ ಅಭಿವೃದ್ಧಿ ನಿರ್ಮಾಣ, ಕಾರ್ಯಾಚರಣೆ ಮತ್ತು ನಿರ್ವಹಣೆಯ ಕುರಿತು ರಾಜ್ಯ ಸರ್ಕಾರ ಮತ್ತು ಮೆ\|\| ಮಾರ್ಗ್ ಶ್ರೀ ಕೃಷ್ಣದೇವರಾಯ ಏರ್‌ಪೋರ್ಟ್ ಪ್ರೈ. ಲಿ. ಚೆನ್ನೈ ಸಂಸ್ಥೆಯೊಂದಿಗೆ ಮಾಡಿಕೊಂಡಿರುವ ಒಪ್ಪಂದವನ್ನು ರದ್ದುಗೊಳಿಸುವ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಆ) | ಈ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಜಮೀನುಗಳನ್ನು ವಶಪಡಿಸಿಕೊಳ್ಳುವ ಸಂದರ್ಭದಲ್ಲಿ ಅಪ್ರೋಚ್ ರಸ್ತೆಗಳ ನಿರ್ಮಾಣಕ್ಕೆ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಯಾವ ಭಾಗದಲ್ಲಿ ಎಷ್ಟು ಜಾಗವಿದೆ ಇಲ್ಲವಾದಲ್ಲಿ ಭೂಮಿ ಸ್ವಾಧೀನ ಪಡಿಸಿಕೊಳ್ಳುವ ಸಂದರ್ಭದಲ್ಲಿ ಈ ಅಪ್ರೋಚ್ ರಸ್ತೆಗಳನ್ನು ಏಕೆ ಸ್ವಾಧೀನ ಪಡಿಸಿಕೊಂಡಿರುವುದಿಲ್ಲ ಕಾರಣವೇನು; (ಮಾಹಿತಿ ನೀಡುವುದು) | ಬಳ್ಳಾರಿ ವಿಮಾನ ನಿಲ್ದಾಣದ ಅಪ್ರೋಚ್ ರಸ್ತೆಗಾಗಿ ಪ್ರತ್ಯೇಕವಾಗಿ ಜಮೀನನ್ನು ಸ್ವಾಧೀನಪಡಿಸಿಕೊಂಡಿರುವುದಿಲ್ಲ. |
| ಇ) | ಬಳ್ಳಾರಿ ಜಿಲ್ಲೆಯಲ್ಲಿ ವಿಮಾನ ನಿಲ್ದಾಣದ ಸಲುವಾಗಿ ವಶಪಡಿಸಿಕೊಂಡಿರುವ ಪ್ರದೇಶದಲ್ಲಿ ಕೌಂಪೌಂಡ್ ನಿರ್ಮಿಸಿರುವುದರಿಂದ ವಿಮಾನ ನಿಲ್ದಾಣಕ್ಕೆ ಅಪ್ರೋಚ್ ರಸ್ತೆಗಳು ಇಲ್ಲದಿರುವುದು | |

| | | |
|---|---|---|
| | ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು) | |

ಸಂಖ್ಯೆ:ಮೂಅಇ 143 ರಾಅವಿ 2022

**(ವಿ. ಸೋಮಣ್ಣ)**
ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ,
ಸಚಿವರು